ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1447 (1784)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ತೋಟಗಾರಿಕೆಗೆ ಸಂಬಂಧಿಸಿದಂತೆ ಸರ್ಕಾರ ಪರಿಚಯಿಸಿರುವ "ಇ-ಸ್ಯಾಪ್" ಮೊಬೈಲ್ ಆ್ಯಪ್ ಕುರಿತು

(ಅ) ತೋಟದ ಬೆಳೆಗಳಲ್ಲಿ ಕಂಡುಬರುವ ಕೀಟಬಾಧೆ, ಪೋಷಕಾಂಶಗಳ ಕೊರತೆ, ಔಷಧಗಳ ಸಿಂಪರಣೆಗಳ ಬಗ್ಗೆ ಮಾಹಿತಿ ಒದಗಿಸುವ ಉದ್ದೇಶದಿಂದ ಸರ್ಕಾರ ಪರಿಚಯಿಸಿರುವ "ಇ-ಸ್ಯಾಪ್" (ಇಲೆಕ್ಟ್ರಾನಿಕ ಸೊಲ್ಯೂಷನ್ ಫಾರ್ ಅಗ್ರಿಕಲ್ಚರ್ ಪೆಸ್ಟ್) ಮೊಬೈಲ್ ಆ್ಯಪ್ ಸಾಮಾನ್ಯ ರೈತರನ್ನು ತಲುಪುವಲ್ಲಿ ವಿಫಲವಾಗಿದೆ ಎಂಬ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರಿಗೆ ಈ ತಂತ್ರಾಂಶದ ಬಗ್ಗೆ ಅರಿವು ಮೂಡಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ತಂತ್ರಾಂಶದಡಿಯಲ್ಲಿ ಬರುವ ತೋಟಗಾರಿಕಾ ಬೆಳೆಗಳ ಕುರಿತು ಮಾಹಿತಿ ನೀಡುವುದು ;

(ಈ) ಸಮಗ್ರ ತೋಟಗಾರಿಕಾ ಯೋಜನೆಗೆ ಇಲಾಖೆಯಲ್ಲಿ ಹೆಸರು ನೋಂದಾಯಿಸಿಕೊಂಡ ರಾಜ್ಯದ ಒಟ್ಟು ರೈತರ ಸಂಖ್ಯೆ ಎಷ್ಟು;

(ಉ) ಸದರಿ ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಹೆಸರು ನೋಂದಾಯಿಸಿಕೊಂಡ ರೈತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)